**Akashvani : Bangalore**
**Regional Bulletin In Kannada**
**17.01.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**17.01.2025 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಬೆಂಗಳೂರಿನಲ್ಲಿಂದು ಅಮೆರಿಕ ದೂತವಾಸ ಕಚೇರಿ ಉದ್ಘಾಟಿಸಿದ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್

೨. ಪಿಎಂ ಇ-ಡ್ರೈವ್ ಯೋಜನೆಯಿಂದ ಮಾಲಿನ್ಯ ರಹಿತ ಸಾರಿಗೆ ವ್ಯವಸ್ಥೆಯ ಪರಿಣಾಮಕಾರಿ ಅನುಷ್ಠಾನ- ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ

೩. ಬೆಂಬಲ ಬೆಲೆಯಡಿ ಸಿರಿಧಾನ್ಯಗಳ ಖರೀದಿಗೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು- ಸಚಿವ ಎನ್.ಚಲುವರಾಯಸ್ವಾಮಿ

೪. ಬೀದರ್ ಎಟಿಎಂ ನಗದು ದರೋಡೆಕೋರರ ಶೀಘ್ರ ಬಂಧನ - ಗೃಹ ಸಚಿವ ಡಾ.ಜಿ.ಪರಮೇಶ್ವರ್ ಭರವಸೆ

**<><*<><>*><>**

ಅಮೆರಿಕಾದೊಂದಿಗೆ ಸಂಬಂಧಗಳನ್ನು ವಿಸ್ತರಿಸಿ ಮತ್ತಷ್ಟು ಗಾಢವಾಗುತ್ತಿರುವ ಹಿನ್ನೆಲೆ ಬೆಂಗಳೂರಿನಲ್ಲಿ ನೂತನ ಅಮೆರಿಕ ದೂತವಾಸ ಕಚೇರಿ ಅತ್ಯಂತ ಅಗತ್ಯವಾಗಿತ್ತು ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಅಮೆರಿಕಾದ ನೂತನ ದೂತವಾಸ ಕಚೇರಿ ಉದ್ಘಾಟಿಸಿದ ನಂತರ ಮಾತನಾಡಿದ ಅವರು, ಕೃತಕ ಬುದ್ಧಿಮತ್ತೆ, ಎಲೆಕ್ಟ್ರಿಕ್ ವಾಹನ, ಬಾಹ್ಯಕಾಶ ವಲಯ, ರಕ್ಷಣೆ, ಡ್ರೋನ್ ಹಾಗೂ ಜೈವಿಕ ತಂತ್ರಜ್ಞಾನದಂತಹ ಹಲವು ಕ್ಷೇತ್ರಗಳಲ್ಲಿ ಎರಡೂ ದೇಶಗಳು ಪರಸ್ಪರ ಸಹಕರಿಸುವ ಸಾಮರ್ಥ್ಯ ಹೊಂದಿದೆ ಎಂದರು. ರಕ್ಷಣೆ, ತಂತ್ರಜ್ಞಾನ ಹಾಗೂ ಎಚ್‌ಎಎಲ್‌ನಂತಹ ಸಂಸ್ಥೆಗಳು ಬೆಂಗಳೂರಿನಲ್ಲಿದ್ದು, ದೂತವಾಸ ಕಚೇರಿಯಿಂದ ಭಾರತ ಮತ್ತು ಬೆಂಗಳೂರು ಪ್ರಯೋಜನ ಪಡೆಯಲಿದೆ ಎಂದು ಹೇಳಿದರು. ಬೆಂಗಳೂರಿನ ದೂತವಾಸ ಕಚೇರಿಯು ವ್ಯಾಪಾರ, ಶಿಕ್ಷಣ, ತಂತ್ರಜ್ಞಾನ ಸಂಸ್ಥೆಗಳು ಹಾಗೂ ಸಾಮಾನ್ಯ ಜನರಿಗೆ ಪ್ರಯೋಜನ ಕಲ್ಪಿಸಲಿದೆ. ನೂತನ ದೂತವಾಸವೂ ಶೀಘ್ರದಲ್ಲೇ ತನ್ನ ವೀಸಾ ಸೇವೆಗಳನ್ನು ಆರಂಭಿಸಲಿದೆ ಎಂದು ಸಚಿವ ಡಾ.ಎಸ್.ಜೈಶಂಕರ್ ವಿಶ್ವಾಸ ವ್ಯಕ್ತಪಡಿಸಿದರು.

ಧ್ವನಿ: ಡಾ.ಎಸ್.ಜೈಶಂಕರ್

**<><*<><>*><>**

ಭಾರತದ ಸಿಲಿಕಾನ್ ಸಿಟಿ, ತಂತ್ರಜ್ಞಾನ, ಆವಿಷ್ಕಾರಗಳ ತವರೂರಾದ ಬೆಂಗಳೂರಿನಲ್ಲಿ ಅಮೆರಿಕ ದೂತವಾಸ ಕಚೇರಿ ಪ್ರಾರಂಭವಾಗುತ್ತಿರುವುದು ಅತ್ಯಂತ ಸಂತಸದ ಸಂಗತಿಯಾಗಿದೆ ಎಂದು ಸಂಸದ

ತೇಜಸ್ವಿ ಸೂರ್ಯ ಹರ್ಷ ವ್ಯಕ್ತಪಡಿಸಿದ್ದಾರೆ. ಹಲವು ದಶಕಗಳಿಂದ ಬೆಂಗಳೂರು ನಗರವು ಜಾಗತಿಕ ಸಂಶೋಧನೆ, ಆವಿಷ್ಕಾರ, ಸಾಫ್ಟ್‌ವೇರ್, ಬಯೋ ಟೆಕ್ನಾಲಜಿ ಮತ್ತಿತರ ಕ್ಷೇತ್ರಗಳಲ್ಲಿ ತನ್ನದೇ ಛಾಪು ಮೂಡಿಸಿದ್ದರೂ ಕೂಡ ವೀಸಾ ಪ್ರಕ್ರಿಯೆಗಳಿಗೆ ಹೈದರಬಾದ್, ಚೆನ್ನೈ, ಮುಂಬೈಗೆ ತೆರಳಬೇಕಾದ ಅನಿವಾರ್ಯತೆ ಇತ್ತು ಎಂದರು. ಬೆಂಗಳೂರಿನಲ್ಲಿ ಅಮೆರಿಕ ದೂತವಾಸ ಕಚೇರಿ ಪ್ರಾರಂಭದಿಂದ ಲಕ್ಷಾಂತರ ಉದ್ಯೋಗಿಗಳು, ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ. ಕನ್ನಡಿಗರ ಬಹುದಿನಗಳ ಬೇಡಿಕೆ ಈಡೇರುತ್ತಿರುವುದು ಅತ್ಯಂತ ಹೆಮ್ಮೆಯ ಸಂಗತಿಯಾಗಿದೆ. ಅಲ್ಲದೆ, ಭಾರತ-ಅಮೆರಿಕಾ ದ್ವಿಪಕ್ಷೀಯ ಸಂಬಂಧ ವೃದ್ಧಿಯಲ್ಲಿ ಇದೊಂದು ಮೈಲಿಗಲ್ಲಾಗಿದೆ ಎಂದು ಸಂಸದ ತೇಜಸ್ವಿ ಸೂರ್ಯ ಹೇಳಿದ್ದಾರೆ.

**<><*<><>*><>**

ಕಳೆದ ಹತ್ತು ವರ್ಷಗಳಲ್ಲಿ ಭಾರತದ ವಾಹನತಯಾರಿಕಾ ಕ್ಷೇತ್ರದಲ್ಲಿ ಅಭೂತಪೂರ್ವ ಕ್ರಾಂತಿ ಆಗಿದ್ದು, ಪಿಎಂ ಇ-ಡ್ರೈವ್ ಯೋಜನೆಯಿಂದ ಮಾಲಿನ್ಯರಹಿತ ಸಾರಿಗೆ ವ್ಯವಸ್ಥೆಯ ಪರಿಣಾಮಕಾರಿ ಅನುಷ್ಠಾನ ಸಾಧ್ಯವಾಗಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ನವದೆಹಲಿಯ ಭಾರತ್ ಮಂಟಪಮ್ ನಲ್ಲಿ ಇಂದು ಭಾರತ್ ಮೊಬಿಲಿಟಿ ಗ್ಲೋಬಲ್ ಎಕ್ಸ್‌ಪೋ ಉದ್ದೇಶಿಸಿ ಮಾತನಾಡಿದ ಅವರು, ವಾಯುಮಾಲಿನ್ಯ ನಿವಾರಣೆ ನಿಟ್ಟಿನಲ್ಲಿ ಅನುಷ್ಠಾನಕ್ಕೆ ತರಲಾಗಿರುವ ಹಸಿರು ಉಪ ಕ್ರಮಗಳಿಂದ ದೇಶೀಯ ಇಕೋ ಅಟೋಮೊಬೈಲ್ ಕ್ಷೇತ್ರಕ್ಕೆ ಹೆಚ್ಚು ಅನುಕೂಲ ಆಗಿದೆ ಎಂದರು. ಶುದ್ಧ ಇಂಧನ ಪರಿಹಾರಗಳು ಮತ್ತು ಅತ್ಯಾಧುನಿಕ ತಂತ್ರಜ್ಞಾನಗಳನ್ನು ಒಳಗೊಂಡಿರುವ ಪರಿಸರ ಸ್ನೇಹಿ ಸಾರಿಗೆಯಲ್ಲಿ ಭಾರತವು ಗಮನಾರ್ಹವಾಗಿ ಅಭಿವೃದ್ಧಿ ಹೊಂದುತ್ತಿದೆ ಎಂದು ಅವರು ತಿಳಿಸಿದರು. ಹಸಿರು ವಾಹನ ಕ್ಷೇತ್ರದ ಪ್ರಯೋಗಶೀಲತೆ ಹಾಗೂ ಸುಸ್ಥಿರ ಅಭಿವೃದ್ಧಿಗೆ ಕೇಂದ್ರ ಸರ್ಕಾರದ ಪಿಎಂ ಇ-ಡ್ರೈವ್ ಯೋಜನೆ ಹಾಗೂ ಉತ್ಪಾದನಾ ಸಂಪರ್ಕ ಸೌಲಭ್ಯದಿಂದ ಹೆಚ್ಚು ಅನುಕೂಲ ಆಗಿದೆ ಎಂದು ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

**ಧ್ವನಿ: ಕುಮಾರಸ್ವಾಮಿ**

**<><*<><>*><>**

ರಾಜ್ಯದಲ್ಲಿ ಕಾನೂನು-ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟು ಹೋಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಲಬುರಗಿಯಲ್ಲಿ ಬಾಲಕಿ ಮೇಲೆ ಅತ್ಯಾಚಾರ ನಡೆದಿದೆ. ಚಾಮರಾಜಪೇಟೆಯಲ್ಲಿ ಹಸುಗಳ ಕೆಚ್ಚಲಿಗೆ ಇರಿದಿದ್ದಾರೆ. ಬೀದರ್‌ನಲ್ಲಿ ಎಟಿಎಂ ದರೋಡೆ ನಡೆದಿದೆ. ರಾಜ್ಯದ ಕಾಂಗ್ರೆಸ್ ಸರ್ಕಾರ ಈ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ ಎಂದು ದೂರಿದರು. ರಾಜ್ಯದಲ್ಲಿ ಭ್ರಷ್ಟಾಚಾರ ತೀವ್ರವಾಗಿದೆ. ಕಲಬುರಗಿಯಲ್ಲಿ ಗುತ್ತಿಗೆದಾರನ ಆತ್ಮಹತ್ಯೆ ನಡೆದಿದೆ. ಬಿಜೆಪಿ ಹೋರಾಟ ಮಾಡಿದ್ದರಿಂದ ಕಾಂಗ್ರೆಸ್‌ನ ಪುಡಾರಿಯನ್ನು ಬಂಧಿssಸಿಲಾಗಿದೆ. ಆದರೆ, ಆತನಿಗೆ ರಾಜಾತಿಥ್ಯ ನೀಡಲಾಗುತ್ತಿದೆ ಎಂದು ಆರೋಪಿಸಿದರು. ಜಾತಿವಾರು ಗಣತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜಕೀಯ ಅಸ್ತ್ರವಾಗಿ ಬಳಸುತ್ತಿದ್ದಾರೆ. ಹಿಂದೆ ಅವರ ಸರ್ಕಾರ ಇದ್ದಾಗ ೨೦೧೬ರಲ್ಲೇ ಜಾತಿವಾರು ಗಣತಿ ವರದಿಯನ್ನು ಅವಸರದಿಂದ ಸಿದ್ಧಪಡಿಸಲಾಯಿತು.

ಸಿದ್ಧರಾಮಯ್ಯನವರೇ ಮುಖ್ಯಮಂತ್ರಿ ಆಗಿದ್ದರೂ ಏಕೆ ಅದನ್ನು ಅನುಷ್ಠಾನ ಮಾಡಿಲ್ಲ ಎಂದು ಬಿ.ವೈ.ವಿಜಯೇಂದ್ರ ಪ್ರಶ್ನಿಸಿದರು.

**<><*<><>*><>**

ಬೆಂಬಲ ಬೆಲೆಯಡಿ ಸಿರಿಧಾನ್ಯಗಳನ್ನು ಖರೀದಿಸಲು ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರದಿಂದ ಶಿಫಾರಸ್ಸು ಮಾಡಲಾಗಿದೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ. ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲೂಕಿನ ಶ್ರೀರಾಂಪುರ ಹೋಬಳಿಯ ಮಲ್ಲಿಹಳ್ಳಿ ಗ್ರಾಮದ ಕೃಷಿಕರಾದ ಪ್ರಭುಲಿಂಗಪ್ಪ ಹಾಗೂ ಮಹೇಶ್ ಅವರ ಸಿರಿಧಾನ್ಯ ಒಕ್ಕಲು ಕಣಕ್ಕೆ ಭೇಟಿ ನೀಡಿದ ಅವರು ರೈತರೊಂದಿಗೆ ಸಂವಾದ ನಡೆಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೊಸದುರ್ಗ ತಾಲೂಕಿನಲ್ಲಿ ರಾಜ್ಯದಲ್ಲಿ ಅತಿಹೆಚ್ಚು ಸಿರಿಧಾನ್ಯ ಬೆಳೆ ಬೆಳೆಯಲಾಗುತ್ತದೆ. ಈ ಭಾಗದಲ್ಲಿ ಸಾಂಪ್ರದಾಯಿಕವಾಗಿಯೇ ಸಿರಿಧಾನ್ಯ ಬೆಳೆಯುವುದು ರೂಢಿಯಲ್ಲಿದೆ ಎಂದರು. ಈ ಮೊದಲು ಸಿರಿಧಾನ್ಯಗಳಿಗೆ ಮಾರುಕಟ್ಟೆ ಇರಲಿಲ್ಲ. ಈಗ ಮಾರುಕಟ್ಟೆ ದೊರಕುತ್ತಿದೆ. ರಾಗಿ, ಭತ್ತ, ತೊಗರಿ ಮಾದರಿಯಲ್ಲಿ ಸಿರಿಧಾನ್ಯಗಳನ್ನು ಬೆಂಬಲ ಬೆಲೆಯಡಿ ಖರೀದಿಸುವಂತೆ ಕೇಂದ್ರ ಸರ್ಕಾರಕ್ಕೆ ಪತ್ರದ ಮೂಲಕ ಮನವಿ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಇದೇ ೨೩ ರಿಂದ ೨೫ ರವರೆಗೆ ಅಂತಾರಾಷ್ಟ್ರೀಯ ಸಾವಯವ ಸಿರಿಧಾನ್ಯ ಮೇಳ ಆಯೋಜಿಸಲಾಗಿದೆ. ದೇಶದ ೨೫ ರಾಜ್ಯಗಳ ಕೃಷಿ ಸಚಿವರು ಹಾಗೂ ಅಧಿಕಾರಿಗಳು ಮತ್ತು ರೈತರು ಭಾಗವಹಿಸುವರು ಎಂದು ಸಚಿವ ಚಲುವರಾಯಸ್ವಾಮಿ ತಿಳಿಸಿದರು.

**<><*<><>*><>**

ಉಲ್ಲಾಳದ ಕೋಟೆಕರ್ ಸಹಕಾರಿ ಬ್ಯಾಂಕ್ ದರೋಡೆ ಪ್ರಕರಣದ ಹಿನ್ನೆಲೆಯಲ್ಲಿ ಮಂಗಳೂರಿನಲ್ಲಿ ಇಂದು ಹಿರಿಯ ಪೊಲೀಸ್ ಅಧಿಕಾರಿಗಳ ಜೊತೆ ತುರ್ತು ಸಭೆ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಶೀಘ್ರ ಆರೋಪಿಗಳ ಪತ್ತೆಗೆ ಸೂಚನೆ ನೀಡಿದ್ದಾರೆ. ಘಟನೆ ಕುರಿತು ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದ ಪೊಲೀಸ್ ಅಧಿಕಾರಿಗಳು, ಸಹಕಾರಿ ಬ್ಯಾಂಕ್‌ನಲ್ಲಿ ಭದ್ರತಾ ಸಿಬ್ಬಂದಿ ಇರಲಿಲ್ಲ. ಐದಾರು ಬ್ಯಾಂಕ್ ಸಿಬ್ಬಂದಿ ಇದ್ದರು. ಆರೋಪಿಗಳು ಕನ್ನಡ ಮತ್ತು ಹಿಂದಿಯಲ್ಲಿ ಮಾತಾಡಿರುವುದು ದಾಖಲಾಗಿದೆ ಎಂದು ತಿಳಿಸಿದರು. ಎಲ್ಲಾ ಟೋಲ್‌ಗಳಲ್ಲೂ ಬಿಗಿ ತಪಾಸಣೆ ನಡೆಸಬೇಕು. ಸುತ್ತಲಿನ ನಾಲ್ಕು ಜಿಲ್ಲೆಗಳ ವ್ಯಾಪ್ತಿಯಲ್ಲಿ ನಾಕಾಬಂದಿ ಹಾಕಿ, ಆದಷ್ಟು ಬೇಗ ಆರೋಪಿಗಳನ್ನು ಬಂಧಿಸಿ, ಕಾನೂನು ಕ್ರಮಕ್ಕೆ ಒಪ್ಪಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದರು.

**<><*<><>*><>**

ಬೀದರ್‌ನಲ್ಲಿ ಎಟಿಎಂಗೆ ಹಣ ತುಂಬಿಸಲು ಬಂದಿದ್ದ ಸಿಬ್ಬಂದಿ ಮೇಲೆ ಗುಂಡಿನ ದಾಳಿ ನಡೆಸಿ, ಹಾಡಹಗಲೇ ದರೋಡೆ ಮಾಡಿ, ಆತಂಕ ಮೂಡಿಸಿದ್ದ ದರೋಡೆಕೋರರ ಗುರುತು ಪತ್ತೆಯಾಗಿದ್ದು, ಶೀಘ್ರದಲ್ಲೇ ಬಂಧಿಸಲಾಗುವುದು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಬ್ಬರು ಆರೋಪಿಗಳನ್ನು ಪೊಲೀಸರು ಪತ್ತೆಹಚ್ಚಿ, ಶೋಧಕಾರ್ಯ ನಡೆಸಿದ್ದಾರೆ. ಹೈದರಾಬಾದ್, ಇಂದೋರ್ ಸೇರಿದಂತೆ ಇತರೆ ಪ್ರದೇಶಗಳಿಗೆ ಪೊಲೀಸರ ತಂಡಗಳು ತೆರಳಿದ್ದು, ಆರೋಪಿಗಳ ಬಂಧನಕ್ಕೆ ಬಲೆ ಬೀಸಲಾಗಿದೆ ಎಂದು ಮಾಹಿತಿ

ನೀಡಿದರು. ಸಾಮಾನ್ಯವಾಗಿ ದೊಡ್ಡ ಮೊತ್ತದ ನಗದು ಸಾಗಿಸುವಾಗ ಬಂದೂಕುಧಾರಿ ಸಿಬ್ಬಂದಿ ಜೊತೆಯಲ್ಲಿರುತ್ತಾರೆ. ದುರದೃಷ್ಟವಶಾತ್ ನಿನ್ನೆ ವಾಹನದಲ್ಲಿ ಬಂದೂಕುಧಾರಿ ಸಿಬ್ಬಂದಿ ಇರಲಿಲ್ಲ. ಬ್ಯಾಂಕ್ ಸಿಬ್ಬಂದಿ ಎಟಿಎಂಗೆ ಹಣ ತುಂಬುವ ಕಾರ್ಯವಿಧಾನವನ್ನು ಬಹಳ ಸಮಯದಿಂದ ಪರಿಶೀಲನೆ ಮಾಡಿ, ಸಂಚು ರೂಪಿಸಿರುವಂತೆ ಕಾಣುತ್ತಿದೆ ಎಂದು ವಿವರಿಸಿದರು. ಬೀದರ್‌ನಲ್ಲಿ ಬ್ಯಾಂಕ್ ಸಿಬ್ಬಂದಿ ಮೇಲೆ ಇಬ್ಬರು ದುಷ್ಕರ್ಮಿಗಳು ಸಿನಿಮೀಯ ರೀತಿಯಲ್ಲಿ ಗುಂಡು ಹಾರಿಸಿ ೯೩ ಲಕ್ಷ ರೂಪಾಯಿಗಳೊಂದಿಗೆ ಪರಾರಿಯಾಗಿದ್ದರು. ಘಟನೆಯಲ್ಲಿ ಸಿಎಂಎಸ್ ನಗದು ಭರಿಸುವ ಏಜೆನ್ಸಿಯ ಸಿಬ್ಬಂದಿಗಳಾದ ವೆಂಕಟೇಶ್ ಮತ್ತು ಶಿವ ಕಾಶಿನಾಥ್ ಎಂಬುವವರು ಮೃತಪಟ್ಟಿದ್ದಾರೆ.

**<><*<><>*><>**

ಕರ್ನಾಟಕ ಲೋಕಸೇವಾ ಆಯೋಗದ ವಿವಿಧ ಇಲಾಖೆಗಳ ಗ್ರೂಪ್ ಬಿ ವೃಂದದ ಹುದ್ದೆಗಳ ನೇಮಕಾತಿ ಪರೀಕ್ಷೆ ಹಾಗೂ ಕಾನೂನು ಪದವಿ ಪರೀಕ್ಷೆಗಳು ಒಂದೇ ದಿನ ಇರುವುದರಿಂದ, ಕಾನೂನು ಪದವಿ ಕಾಲೇಜುಗಳ ಸೆಮಿಸ್ಟರ್ ಪರೀಕ್ಷೆಗಳನ್ನು ಮುಂದೂಡುವಂತೆ ಭಾರತ ವಿದ್ಯಾರ್ಥಿ ಫೆಡರೇಷನ್ ಕಾನೂನು ವಿದ್ಯಾರ್ಥಿಗಳ ಘಟಕವು ಒತ್ತಾಯಿಸಿದೆ. ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ, ಹುಬ್ಬಳ್ಳಿ ವ್ಯಾಪ್ತಿಯಲ್ಲಿ ಬರುವ ಕಾನೂನು ಪದವಿ ಕಾಲೇಜುಗಳ ಸೆಮಿಸ್ಟರ್ ಪರೀಕ್ಷೆಗಳು ಇದೇ ತಿಂಗಳು ಪ್ರಾರಂಭವಾಗುತ್ತಿವೆ. ಆದರೆ ಕರ್ನಾಟಕ ಲೋಕಸೇವಾ ಆಯೋಗದ ವಿವಿಧ ಇಲಾಖೆಗಳ ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಇದೇ ೨೫ ರಂದು ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯುತ್ತಿದೆ, ಹೀಗಾಗಿ ಕಾನೂನು ಪದವಿ ಕಾಲೇಜುಗಳ ಸಿವಿಲ್ ಪ್ರೊಸೀಜರ್ ಸಂಹಿತೆ ವಿಷಯದ ಪರೀಕ್ಷೆಗಳನ್ನು ಮುಂದೂಡುವಂತೆ ಭಾರತ ವಿದ್ಯಾರ್ಥಿ ಫೆಡರೇಷನ್ ಮನವಿ ಮಾಡಿದೆ.

**<><*<><>*><>**

ರಾಜ್ಯ ಸರ್ಕಾರವು ಹಲವು ಘಟನೆಗಳಿಗೆ ಸಂಬಂಧಿಸಿಂತೆ ಗೃಹ ಸಚಿವರಿಗೆ ಮಾಹಿತಿಯನ್ನೇ ನೀಡದೆ ಕತ್ತಲಲ್ಲಿ ಇಟ್ಟಿರುವುದು ಸರಿಯಲ್ಲ. ಸರ್ಕಾರದಲ್ಲಿ ಗೃಹ ಸಚಿವರನ್ನು ಮೂಲೆಗುಂಪು ಮಾಡಲಾಗಿದೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ದೂರಿದ್ದಾರೆ. ಬೆಂಗಳೂರಿನ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬ್ಯಾಂಕ್ ದರೋಡೆಗಳು ರಾಜ್ಯದಲ್ಲಿ ಕಾನೂನು-ಸುವ್ಯವಸ್ಥೆ ಹದಗೆಟ್ಟಿರುವುದಕ್ಕೆ ನಿದರ್ಶನ ಎಂದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**